# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಶಾಲೆಗಳಿಂದ ಹೊರ ಉಳಿದ ಅಲ್ಪಸಂಖ್ಯಾತರ ಮಕ್ಕಳನ್ನು ಮರಳಿ ಶಾಲೆಗೆ ತರಲು ಈಗಾಗಲೇ ಮುಚ್ಚಲ್ಪಟ್ಟಿರುವ ಸರ್ಕಾರಿ ಉರ್ದು ಶಾಲೆ /ಜಾಗದಲ್ಲಿ 200 ಮೌಲಾನ ಅಜಾದ್ ಮಾದರಿ ಶಾಲೆಗಳನ್ನು ಮುಂದಿನ 2 ವರ್ಷಗಳಲ್ಲಿ ತೆರೆಯಲು ಮಂಜೂರಾತಿ ನೀಡಿ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:** 1. 2017-18ನೇ ಸಾಲಿನ ಆಯವ್ಯಯ ಭಾಷಣ **ಕಂಡಿಕೆ:215**.

2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತದ ಪ್ರಸ್ತಾವನೆ ಸಂಖ್ಯೆ: ಅಸಂನಿ/ಮೌ.ಅ.ಮಾ.ಶಾ/ ಸಿಆರ್-11/2017-18 ದಿನಾಂಕ: 28-04-2017.

*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-215ರಲ್ಲಿ **"ಶಾಲೆಗಳಿಂದ ಹೊರಉಳಿದ ಅಲ್ಪಸಂಖ್ಯಾತರ ಮಕ್ಕಳನ್ನು ಮರಳಿ ಶಾಲೆಗ ತರಲು ಈಗಾಗಲೇ ಮುಚ್ಚಲ್ಪಟ್ಟಿರುವ ಸರ್ಕಾರಿ ಉರ್ದು ಶಾಲೆ/ಜಾಗದಲ್ಲಿ 200 ಮೌಲಾನಾ ಅಜಾದ್ ಮಾದರಿ ಶಾಲೆಗಳನ್ನು ಮುಂದಿನ 2 ವರ್ಷಗಳಲ್ಲಿ ತೆರೆಯಲಾಗುವುದು"** ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಪತ್ರದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರು ಸಂವಿಧಾನದ 21ಎ ಕಲಂನ ಸೇರ್ಪಡೆಯಿಂದ ಶಿಕ್ಷಣ ಮುಲಭೂತ ಹಕ್ಕು ಆಗಿದ್ದು, ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯ್ದೆ-2009 ಒಂದು ಕಾಂತ್ರಿಕಾರಕ ಸಾಮಾಜಿಕ ಕಾಯ್ದೆಯಾಗಿದೆ. ಕರ್ನಾಟಕ ಸರ್ಕಾರವು 2012-13ರ ಸಾಲಿನಿಂದ ಆರ್.ಟಿ.ಇ. ಕಾಯ್ದೆಯನ್ನು ಜಾರಿಗೆ ತಂದಿದ್ದು, ಕಡ್ಡಾಯ ಅಧಿಸೂಚನೆಯನ್ನು, ಸುತ್ತೋಲೆಗಳನ್ನು ಕ್ಷೇತ್ರ ಸಿಬ್ಬಂದಿಗಳಿಗೆ ಹೊರಡಿಸಲಾಗಿದೆ. ವಿಶೇಷ ಆಧ್ಯತಾ ಜಿಲ್ಲೆಗಳನ್ನು ಇತರೆ ಜಿಲ್ಲೆಗಳ ಮಟ್ಟಕ್ಕೆ ಉನ್ನತಿಕರಿಸುವ ನಿಟ್ಟಿನಲ್ಲಿ ಸರ್ವಶಿಕ್ಷಣ ಅಭಿಯಾನ ಅನುಷ್ಠಾನಗೊಳಿಸುತ್ತಿರುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆಗಳನ್ನು ಪ್ರಾರಂಭಿಸಿ ಕಾರ್ಯನಿರ್ವಹಿಸುತ್ತಿದ್ದು, ಈ ವಸತಿ ಶಾಲೆಗಳ ಮಾದರಿಯಲ್ಲಿ ವಸತಿ ರಹಿತ ಶಾಲೆಗಳನ್ನು 6ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಪ್ರಾರಂಭಿಸಿ ನಂತರದ ವರ್ಷಗಳಲ್ಲಿ 10ನೇ ತರಗತಿಯವರೆಗೆ ವಿಸ್ತರಿಸಲು ಉದ್ದೇಶಿಸಲಾಗಿದೆ. ಸದರಿ ಶಾಲೆಗಳಲ್ಲಿ ಪ್ರತಿ ತರಗತಿಗೆ 60 ಸಂಖ್ಯಾಬಲ ಹೊಂದಲಿದ್ದು, ದಾಖಲಾತಿಯಲ್ಲಿ ಶೇ.75% ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಹಾಗೂ ಶೇ.25% ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈಗಾಗಲೇ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ನಿಗಧಿಪಡಿಸಿರುವ ಅನುಪಾತದಲ್ಲಿ ಪ್ರವೇಶ ಪಡೆಯಲಾಗುವುದು ಹಾಗೂ ಪ್ರತಿ ತರಗತಿಯಲ್ಲಿ ಹೆಣ್ಣು ಮಕ್ಕಳಿಗೆ ಶೇ.50% ಮೀಸಲಿರಿಸಲಾಗುವುದು ಎಂದು ತಿಳಿಸುತ್ತಾ, 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ, ಹೊಸದಾಗಿ 100 ಮೌಲಾನಾ ಅಜಾದ್ ಮಾದರಿ ಶಾಲೆಗಳನ್ನು ತೆರೆಯಲು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

....2